**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹೊನ್ನಾವರ. ಸಿ.ಸಿ ನಂ.1584/2023.**

ಪಿರ್ಯಾದುದಾರರುಃ- ಹರಿಶ್ಚಂದ್ರ ದುರ್ಗು ಅಂಬಿಗ,
ವಯಸ್ಸು ಸುಮಾರು 36 ವರ್ಷ,
ಸಾಕೀನಃ ಹೈಗುಂದ,
ಅಂಚೆಃ ಹೆರಂಗಡಿ,
ತಾಲೂಕುಃ ಹೊನ್ನಾವರ, (ಉ.ಕ).

**-ವಿರುದ್ಧ-**

ಆರೋಪಿಯ ಹೆಸರುಃ- ಸಚಿನ್ ವೆಂಕಟೇಶ ಅಂಬಿಗ,
ವಯಸ್ಸು ಸುಮಾರು 33 ವರ್ಷ,
ಸಾಕೀನಃ- ಹುಂಜಿಮಕ್ಕಿ,
ಪೋಸ್ಟಃ ಕುದ್ರಗಿ,
ತಾಲೂಕುಃ- ಹೊನ್ನಾವರ, (ಉ.ಕ.).

****

**ದಂಡ ಪ್ರಕ್ರಿಯಾ ಸಂಹಿತೆ ಕಲಂ. 313 ರನ್ವಯ ಆರೋಪಿಯ ಹೇಳಿಕೆ.**

ಪ್ರಶ್ನೆಃ 1. ನೀವು ಪಿರ್ಯಾದುದಾರರ ಪರವಾಗಿ ಫ್ರಾಸಾ-1 ರವರ ಹೇಳಿಕೆಯನ್ನು ಕೇಳಿದ್ದೀರಾ?

ಆರೋಪಿಯ ಉತ್ತರಃ- ಕೇಳಿದ್ದೇನೆ

ಪ್ರಶ್ನೆಃ 2. ಫ್ರಾಸಾ-1 ರವರು ತಮ್ಮ ಸಾಕ್ಷ್ಯದಲ್ಲಿ, ಆರೋಪಿಯಾದ ನೀವು ಪಿರ್ಯಾದಿಯವರ ಹತ್ತಿರ ಬೋಟ್ ಕೆಲಸದ ಕುರಿತು ಸಾಲವನ್ನು ಪಡೆದುಕೊಂಡಿದ್ದು ಇರುತ್ತದೆ, ಸದರಿ ಸಾಲಕ್ಕೆ ಸಂಬಂಧಪಟ್ಟಂತೆ ನೀವು ಪಿರ್ಯಾದಿ ಸಂಸ್ಥೆಯ ಹೆಸರಿಗೆ ನಿಮ್ಮ ಬ್ಯಾಂಕ್ ಖಾತೆಯುಳ್ಳ **ಕೆನರಾ ಬ್ಯಾಂಕ್., ಬಳಕೂರು** ಶಾಖೆಯ ನಿಪಿ-1ರ ಚೆಕ್ ನಂ.236697 ನ್ನು ದಿನಾಂಕ 31-10-2023 ರಂದು ರೂ. 85,000/- ಎಂದು ನಮೂದಿಸಿ ಚೆಕ್ ಗೆ ಸಹಿ ಮಾಡಿಕೊಟ್ಟು, ಸದರಿ ಚೆಕ್ ನ್ನು ಬ್ಯಾಂಕ್ ಗೆ ಹಾಜರುಪಡಿಸಿದ ಕೂಡಲೇ ಹಣ ಸಿಗುತ್ತದೆ ಎಂದು ಭರವಸೆ ನೀಡಿರುತ್ತೀರೆಂದು ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ- ಸುಳ್ಳು

ಪ್ರಶ್ನೆಃ 3. ಫ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಪಿರ್ಯಾದಿಯವರು ಹಣ ಪಡೆಯುವ ಸಲುವಾಗಿ ಸದರಿ ಚೆಕನ್ನು ಅವರ ಸಂಸ್ಥೆಯ ಖಾತೆಯಿರುವ **ಭಾರತೀಯ ಸ್ಟೇಟ್ ಬ್ಯಾಂಕ್., ಹೊನ್ನಾವರ** ಶಾಖೆಯಲ್ಲಿ ಹಾಜರುಪಡಿಸಿದಾಗ, ಸದರಿ ಬ್ಯಾಂಕ್ ನವರು, 'Drawers Signature Differs' ಎಂದು ತಿಳಿಸಿ ಸದರಿ ಚೆಕನ್ನು ದಿನಾಂಕ 04-11-2023 ರಂದು ನಿಪಿ-2 ರ ಮೆಮೋದೊಂದಿಗೆ ವಾಪಾಸ್ ನೀಡಿರುತ್ತಾರೆ ಎಂದು ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ-ಸುಳ್ಳು

ಪ್ರಶ್ನೆಃ 4. ಫ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಪಿರ್ಯಾದಿಯವರು ನಿಮಗೆ ವಕೀಲರ ಮೂಲಕ ದಿನಾಂಕ 10-11-2023 ರಂದು ನಿಪಿ-3 ರಂತೆ ರಿಜಿಸ್ಟರ್ ನೋಟಿಸ್ ಕಳುಹಿಸಿದ್ದು, ಸದರಿ ನೋಟಿಸ್ ನಿಮಗೆ ದಿನಾಂಕ 20-11-2023 ರಂದು ಜಾರಿಯಾಗಿದ್ದರೂ ಸಹ ನೀವು ಸದರಿ ಚೆಕ್ ನಲ್ಲಿ ನಮೂದಿಸಿದ ಹಣವನ್ನು ನೀಡಿರುವುದಿಲ್ಲ ಎಂದು ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ-ಸುಳ್ಳು

ಪ್ರಶ್ನೆ 5: ನಿಮ್ಮ ಪರವಾಗಿ ಏನಾದರೂ ಸಾಕ್ಷಿ ಇದೆಯೇ?

ಆರೋಪಿಯ ಉತ್ತರಃ- ಇದೆ

ಪ್ರಶ್ನೆ 6: ಸದ್ರಿ ಪ್ರಕರಣ ಕುರಿತು ನೀವು ಏನಾದರೂ ಹೇಳುವುದು ಇದೆಯೇ?

ಆರೋಪಿಯ ಉತ್ತರಃ- ಏನು ಇಲ್ಲ

(ಈ ಮೂಲಕ ಪ್ರಮಾಣಿಸುವುದೇನೆಂದರೆ ಆರೋಪಿಯು ಕೊಟ್ಟಂತ ಹೇಳಿಕೆಯ ಉತ್ತರವನ್ನು ಪಡೆಯಲಾಗಿದೆ)

ಸಹಿ ಇದೆ/-

**ದಿನಾಂಕಃ- 18-07-2025.**

**(ಅನಿಲ್ ಜೋನ್ ಸಿಕ್ವೇರಾ).,**
**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಮ್.ಎಫ್.ಸಿ.,ಯವರ ನ್ಯಾಯಾಲಯ.,ಹೊನ್ನಾವರ.**

****

ಆರೋಪಿಯ ಸಹಿಃ- ಸಹಿ ಇದೆ